iv) ಜೀತಪ್ರಕರಣಗಳನ್ನು ಪತ್ತೆ ಹಚ್ಚುವ ಸಲುವಾಗಿ ಪ್ರತಿ ಗ್ರಾಮ ಪ್ರವಾಸ ಸಮಯದಲ್ಲಿ ಅನಿರೀಕ್ಷಿತ ತಪಾಸಣೆ ಕಾರ್ಯ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾ ದಂಡಾಧಿಕಾರಿಗಳಿಗೆ ಹಾಗೂ ಉಪ ವಿಭಾಗೀಯ ದಂಡಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

v) ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993ಕ್ಕೆ ಹೊಸ ಕಲಂ ಸಂ.58ಎ ಯನ್ನು ಸೇರ್ಪಡೆ ಮಾಡುವ ಮುಖಾಂತರ ಪ್ರತಿ ಗ್ರಾಮ ಪಂಚಾಯತಿಗೆ ತನ್ನ ಕಾರ್ಯವ್ಯಾಪ್ತಿಯಲ್ಲಿ ಯಾವುದೇ ಜೀತಪ್ರಕರಣ ಕಂಡು ಬಂದ ಕೂಡಲೇ ಸಂಬಂಧಪಟ್ಟ ತಾಲ್ಲೂಕು ದಂಡಾಧಿಕಾರಿಗೆ ವರದಿ ಮಾಡುವ ಜವಾಬ್ದಾರಿಯನ್ನು ಕಡ್ಡಾಯ ಮಾಡಲಾಗಿದೆ. ಹಾಗೂ ಈ ಸಂಬಂಧ ಪ್ರತಿ ಮೂರು ತಿಂಗಳಿಗೆ ಒಮ್ಮೆ ಗ್ರಾಮ ಪಂಚಾಯತಿಯ ಸಭೆ ಸೇರಿ ಕಡ್ಡಾಯವಾಗಿ ಠರಾವು ಪಾಸು ಮಾಡಲು ನಿರ್ದೇಶನ ನೀಡಲಾಗಿದೆ.

vi) ನುರಿತ ಸ್ವಯಂ ಸೇವಾ ಸಂಘಗಳ ಸಹಯೋಗದೊಂದಿಗೆ ಜೀತಪದ್ಧತಿ ಕುರಿತು ಹಾಗೂ ಜಿಲ್ಲಾ ಲೀಡ್ ಬ್ಯಾಂಕ್‌ಗಳ ವತಿಯಿಂದ ಜೀತವಿಮುಕ್ತರ ಪುನರ್ವಸತಿ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜಿಲ್ಲಾ ಮಟ್ಟದಲ್ಲಿ ಕಾರ್ಯಾಗಾರಗಳನ್ನು ನಡೆಸಲಾಗಿದೆ.

59 (147) ಶ್ರೀ ಶ್ರೀನಿವಾಸ್ ಎಂ (ಮಂಡ್ಯ) :– ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ಕಾಲೇಜುಗಳು ಸ್ವಂತ ಕಟ್ಟಡ ಮತ್ತು ಮೂಲ ಸೌಕರ್ಯಗಳನ್ನು ಹೊಂದಿವೆ;

(ಆ) ಮಂಡ್ಯ ನಗರದ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಕೊಠಡಿ ಮತ್ತು ಇತರೆ ಸೌಲಭ್ಯಗಳಿಲ್ಲದೆ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈ ಗೊಂಡ ಕ್ರಮವೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :–

(ಅ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು 71 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿದ್ದು, ಅದರಲ್ಲಿ 65 ಕಾಲೇಜುಗಳು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಾಗಿದ್ದು, 06 ಸ್ವತಂತ್ರ ಪದವಿ ಪೂರ್ವ ಕಾಲೇಜುಗಳಾಗಿದ್ದು ಇವುಗಳಿಗೆ ಸ್ವಂತ ಕಟ್ಟಡವಿರುವುದಿಲ್ಲ. 19 ಕಾಲೇಜುಗಳಿಗೆ ಪಾಳಿ ಪದ್ಧತಿಯಲ್ಲಿ ನಡೆಯುತ್ತಿರುತ್ತವೆ. ಹಂತ ಹಂತವಾಗಿ ಕೊಠಡಿಗಳನ್ನು

ಆರ್.ಐ.ಡಿ.ಎಫ್ ಯೋಜನೆಗಳಡಿ ಒದಗಿಸಲಾಗುವುದು. ಭಾಗಶ: ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲ ಭೂತ ಸೌಕರ್ಯಗಳ ಅವಶ್ಯಕತೆ ಇರುತ್ತದೆ. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು 2007–08ನೇ ಸಾಲಿಗೆ ಮಂಡ್ಯ ಜಿಲ್ಲೆಗೆ 12.50 ಲಕ್ಷ ರೂಗಳನ್ನು ಬಿಡುಗಡೆ ಮಾಡಲಾಗಿದೆ. ಅನುದಾನದ ಲಭ್ಯತೆಯನ್ನು ಅಧರಿಸಿ ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

(ಆ) ಬಂದಿದೆ.

ಮಂಡ್ಯ ನಗರದ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಕೊಠಡಿ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸಲು ಅಪೆಂಡಿಕ್ಸ್–ಇ ನಡಿ 50.00 ಲಕ್ಷ ರೂಗಳನ್ನು ಒದಗಿಸಿದ್ದು, ಕೊಠಡಿ ಮತ್ತು ಲೈಬ್ರರಿಯನ್ನು ನಿರ್ಮಾಣ ಮಾಡಲಾಗುತ್ತಿದೆ.

57 (15) ಶ್ರೀ ಸಂಗಮೇಶ್ವರ ಬಿ.ಕೆ. :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭದ್ರಾವತಿ ಕ್ಷೇತ್ರದಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ, ಮಕ್ಕಳಿಗೆ ಸರಿಯಾಗಿ ವ್ಯಾಸಂಗ ನಡೆಯುತ್ತಿಲ್ಲವಾದ್ದರಿಂದ ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :–

(ಅ) ಹೌದು

(ಆ) 2008–09ರ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಸದರಿ ಕಾಲೇಜುಗಳಲ್ಲಿ ಕಾರ್ಯಭಾರದ ಹೆಚ್ಚಳ ಉಂಟಾದಲ್ಲಿ ಅತಿಥಿ ಉಪನ್ಯಾಸಕರ ನೇಮಕಾತಿ ಮಾಡುವ ಅಧಿಕಾರವನ್ನು ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಗೆ ನೀಡಲಾಗಿದೆ. ಅದಲ್ಲದೆ ಉಪನ್ಯಾಸಕರ ಹುದ್ದೆಗಳನ್ನು ತುಂಬುವ ಸಲುವಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಆಯ್ಕೆ ಪ್ರಕ್ರಿಯೆ ನಡೆಯುತ್ತಿದೆ.

60 (99) ಶ್ರೀ ಸುರೇಶ್‌ಬಾಬು. ಸಿ.ಬಿ. (ಚಿಕ್ಕನಾಯಕನಹಳ್ಳಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ಅನುಕಂಪದ ಆಧಾರದ ಮೇಲೆ ನೌಕರಿ ನೀಡಲಾಗುತ್ತಿದೆಯೇ ?